**<u>ಕರ್ನಾಟಕ ಸರ್ಕಾರ</u>**

ಸಂಖ್ಯೆ: ಇಡಿ 74 ಟಿಇಸಿ 2019

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:14-08-2019

ಇಂದ,

ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ,
ಬೆಂಗಳೂರು.

ಇವರಿಗೆ,

ಕಾರ್ಯನಿರ್ವಾಹಕ ನಿರ್ದೇಶಕರು,
ಕರ್ನಾಟಕ ಪರೀಕ್ಷಾ ಪ್ರಾಧಿಕಾರ,
ಮಲ್ಲೇಶ್ವರಂ,
ಬೆಂಗಳೂರು.

ಮಾನ್ಯರೇ,

ವಿಷಯ:- ಅಂತಿಮ ಸುತ್ತಿನ ನಂತರದಲ್ಲಿ ಖಾಲಿ ಉಳಿಯುವ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳ ಸೀಟುಗಳನ್ನು ಭರ್ತಿ ಮಾಡುವ ಕುರಿತು.

ಉಲ್ಲೇಖ:- ಸಮಸಂಖ್ಯೆಯ ದಿನಾಂಕ:29.07.2019ರ ಪತ್ರ.

>>><<<

ಮೇಲ್ಕಂಡ ವಿಷಯಕ್ಕೆ ಸಂಬಂದಿಸಿದಂತೆ, ದಿನಾಂಕ:28.05.2019ರ ಅಪರಾಹ್ನ 3.00ಗಂಟೆಗೆ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆರವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಚರ್ಚಿಸಿರುವಂತೆ ಪ್ರಸ್ತಾವನೆಯನ್ನು ಪರಿಶೀಲಿಸಿ, ಕೊನೆಯ ಹಂತದ ಸೀಟು ಹಂಚಿಕೆಯ ಪ್ರಕ್ರಿಯೆಯ ನಂತರದಲ್ಲಿ ಬಾಕಿ ಉಳಿದ ಸೀಟುಗಳ ವಿವರಗಳನ್ನು ಕಾಲೇಜುವಾರು ಮತ್ತು ಕೋರ್ಸುವಾರು ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಹಾಗೂ ಕೊನೆಯ ಹಂತದ ಸೀಟು ಹಂಚಿಕೆ ಪ್ರಕ್ರಿಯೆ ನಂತರದಲ್ಲಿ ಬಾಕಿ ಉಳಿದ ಸೀಟುಗಳನ್ನು ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳ ಪ್ರಾಂಶುಪಾಲರುಗಳ ಹಂತದಲ್ಲಿಯೇ ಪಾರದರ್ಶಕವಾಗಿ ಮತ್ತು ಮೆರಿಟ್ ಆಧಾರದ ಮೇಲೆ ಭರ್ತಿ ಮಾಡಿಕೊಂಡು, ಭರ್ತಿ ಮಾಡಿಕೊಂಡ ಅಭ್ಯರ್ಥಿಗಳ ವಿವರಗಳನ್ನು ಪರಿಶೀಲಿಸಿ, ದೃಡೀಕರಿಸಲು ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ ಕಳುಹಿಸುವಂತೆ ಹಾಗೂ ಮುಂದುವರೆದು, ಈ ಎಲ್ಲಾ ಪ್ರಕ್ರಿಯೆಯನ್ನು ಮಾನ್ಯ ಸರ್ವೋಚ್ಚ ನ್ಯಾಯಾಲಯವು ನಿಗಧಿಪಡಿಸಿರುವ ದಿನಾಂಕದೊಳಗಾಗಿ ಮುಕ್ತಾಯಗೊಳಿಸತಕ್ಕದ್ದು ಎಂದು ಉಲ್ಲೇಖಿತ ಪತ್ರದಲ್ಲಿ ತಿಳಿಸಲಾಗಿತ್ತು.

ಆದರೆ, ರಾಜ್ಯದಲ್ಲಿ ಪ್ರವಾಹ ಪರಿಸ್ಥಿತಿ ಹಿನ್ನೆಲೆಯಲ್ಲಿ ಕರ್ನಾಟಕ ಪರೀಕ್ಷಾ ಪ್ರಾಧೀಕಾರವು ಎರಡನೇ ಮುಂದುವರಿದ ಸುತ್ತಿನ ಪ್ರಕ್ರಿಯೆಯನ್ನು ಆಗಸ್ಟ್ 15ರ ನಂತರವು ನಡೆಸುತ್ತಿರುವುದರಿಂದ, ಉಲ್ಲೇಖಿತ ಪತ್ರದಲ್ಲಿ ತಿಳಿಸಲಾದಂತೆ ಬಾಕಿ ಉಳಿದ ಸೀಟುಗಳನ್ನು ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳ ಪ್ರಾಂಶುಪಾಲರುಗಳ ಹಂತದಲ್ಲಿ **<u>ಭರ್ತಿ ಮಾಡದೇ</u>** ಇರುವಂತೆ ತಿಳಿಸಲು ನಿರ್ದೇಶಿತಳಾಗಿದ್ದೇನೆ.

ತಮ್ಮ ನಂಬುಗೆಯ

14/8/19

(ಮನೋರಮ ಡಿ.ಸಿ)
ಸರ್ಕಾರದ ಅಧೀನ ಕಾರ್ಯದರ್ಶಿ
ಶಿಕ್ಷಣ ಇಲಾಖೆ (ತಾಂತ್ರಿಕ)

ಪ್ರತಿ:

1) ಕುಲಸಚಿವರು, ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ, ಜ್ಞಾನ ಸಂಗಮ, ಬೆಳಗಾಂ
2) ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು.
3) ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಕಾಲೇಜಿನ ಪ್ರಾಂಶುಪಾಲರುಗಳಿಗೆ - ನಿರ್ದೇಶನಾಲಯದ ಮುಖಾಂತರ ಸಂಬಂಧಪಟ್ಟ ಪ್ರಾಂಶುಪಾಲರುಗಳಿಗೆ ನಿರ್ದೇಶನ ನೀಡುವಂತೆ ಕೋರಿದೆ.